ಕಚೇರಿಗಳಿಂದ ಜಾರಿ ಮಾಡಲಾಗಿದ್ದು ತೆರವು ಗೊಳಿಸಲು ಕ್ರಮ ವಹಿಸಲಾಗುತ್ತಿದೆ.

ಬಂಡೀಪುರದಲ್ಲಿನ ಹುಲಿ ಸಂರಕ್ಷಣೆ ಯೋಜನೆಯ ಕಛೇರಿ.

೨೯೧೦(೩೬೪೬)

ಶ್ರೀ ಕಟ್ಟಾ ಸುಬ್ಬಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಂಡೀಪುರದಲ್ಲಿನ ಹುಲಿ ಸಂರಕ್ಷಣೆ ಯೋಜನೆಯಡಿಯಲ್ಲಿ ಉಪ ಸಂರಕ್ಷಣಾಧಿಕಾರಿಗಳ ನೂತನ ಕಛೇರಿ ಉದ್ಘಾಟನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸದರಿ ಕಛೇರಿ ಗುಂಡ್ಲುಪೇಟೆಯಲ್ಲಿ ಖಾಸಗಿ ಕಟ್ಟಡದಲ್ಲಿ ಮುಂದುವರಿಯುತ್ತಿರುವುದಕ್ಕೆ ಕಾರಣಗಳೇನು?

ಇ) ಕೂಡಲೇ ಈ ಕಛೇರಿಯನ್ನು ಸ್ವಂತ ಕಟ್ಟಡಕ್ಕೆ ಸ್ಥಳಾಂತರಿಸಲು ಸರ್ಕಾರ ಕ್ರಮ ಕೈಗೊಳ್ಳತ್ತದೆಯೇ?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು):

ಅ) ಹೌದು.

ಆ) ಸದರಿ ಕಛೇರಿಯು ಸ್ಥಳಾಂತರಗೊಂಡಿದ್ದು ಗುಂಡ್ಲುಪೇಟೆಯಲ್ಲಿ ಮುಂದುವರಿಯುತ್ತಿರುವುದಿಲ್ಲ.

ಇ) ಸದರಿ ಕಛೇರಿಯನ್ನು ದಿನಾಂಕ:೧೧-೭-೨೦೦೧ರಂದು ಬಂಡೀಪುರಕ್ಕೆ ಸ್ಥಳಾಂತರಿಸಲಾಗಿದೆ.

ರಾಜ್ಯದಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯ ಸ್ಥಾಪನೆ.

೨೯೧೧(೩೬೪೯)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಪಶುಸಂಗೋಪನೆ ಮತ್ತು

ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಪಶು ವೈದ್ಯಕೀಯ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಸರ್ಕಾರ ಈಗಾಗಲೇ ಹಲವಾರು ಭಾರಿ ಭರವಸೆ ನೀಡಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಈ ವಿಶ್ವವಿದ್ಯಾಲಯವನ್ನು ಸ್ಥಾಪಿಸಲಾಗಿದೆಯೇ?

ಇ) ಇಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಎ.ಕೃಷ್ಣಪ್ಪ (ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು):

ಅ) ನಿಜ

ಆ) ವಿಷಯವು ಪರಿಶೀಲನೆಯಲ್ಲಿದೆ.

ಇ) ಉದ್ಭವಿಸುವುದಿಲ್ಲ.

ಶಿವಾಜಿನಗರ ಕ್ಷೇತ್ರದ ಕಾಮಗಾರಿಗಳು.

೨೯೧೨(೩೬೫೦)

ಶ್ರೀ ಕಟ್ಟಾ ಸುಬ್ರಮಣ್ಯ ನಾಯ್ಡು(ಶಿವಾಜಿನಗರ): ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಟ್ಟು ಉತ್ತರಿಸುವರೆ?

ಅ) ೨೦೦೧-೦೨ನೇ ಸಾಲಿನಲ್ಲಿ ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖೆ ಕೈಗೊಂಡಿರುವ ಕಾಮಗಾರಿಗಳು ಯಾವುವು?

ಆ) ಈ ಕಾಮಗಾರಿಗಳಿಗೆ ಮಂಜೂರಾದ ಹಣವೆಷ್ಟು?

ಇ) ಈ ಕಾಮಗಾರಿಗಳ ಪ್ರಗತಿ ಏನು? (ವಿವರ ನೀಡುವುದು)

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು):

ಅ) ೨೦೦೧-೦೨ನೇ ಸಾಲಿನಲ್ಲಿ ಶಿವಾಜಿನಗರ ವಿಧಾನ ಸಭಾ ಕ್ಷೇತ್ರದಲ್ಲಿ ಲೋಕೋಪಯೋಗಿ ಇಲಾಖಾ ವತಿಯಿಂದ ೫೫ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.